ESTD : No. JRB/Cell.II/69/Regn-4876/77-78
Date : 09-12-1977

☎:080-26601442

# ಬೆಂಗಳೂರು ನಗರ ಜಿಲ್ಲಾ ಸಹಕಾರ ಒಕ್ಕೂಟ ನಿಯಮಿತ

## THE BANGALORE CITY DIST. CO-OPERATIVE UNION LTD.,

' ಸಹಕಾರ ಭವನ ' ನಂ. 1/3, 3ನೇ ಮುಖ್ಯರಸ್ತೆ, ಚಾಮರಾಜಪೇಟೆ, ಬೆಂಗಳೂರು–560 018
E-mail: bcdcu1977@gmail.com

**ಜೆ. ಮಂಜುನಾಥ್**
ಅಧ್ಯಕ್ಷರು

**ಕೃಷ್ಣಪ್ಪ ಕೆ.ಸಿ.**
ಉಪಾಧ್ಯಕ್ಷರು

**ಗೌತಮ್ ಹೆಚ್.ಎನ್.**
ಖಜಾಂಚಿ

## ಪ್ರಕಟಣೆಗಾಗಿ

**ಆನೇಕಲ್ ತಾಲ್ಲೂಕಿನ ಎಲ್ಲಾ ಹಾಲು ಉತ್ಪಾದಕರ ಸಹಕಾರ ಸಂಘಗಳ ಅಧ್ಯಕ್ಷರು ಮತ್ತು ಮುಖ್ಯಕಾರ್ಯನಿರ್ವಾಹಕರುಗಳಿಗೆ ಒಂದು ದಿನದ ಜಿಲ್ಲಾ ಮಟ್ಟದ ವಿಶೇಷ ತರಬೇತಿ ಕಾರ್ಯಕ್ರಮ**

ಬೆಂಗಳೂರು :– ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳ ನಿ., ಬೆಂಗಳೂರು, ಬೆಂಗಳೂರು ನಗರ ಜಿಲ್ಲಾ ಸಹಕಾರ ಒಕ್ಕೂಟ ನಿ., ಬೆಂಗಳೂರು, ಬೆಂಗಳೂರು ಸಹಕಾರ ಹಾಲು ಒಕ್ಕೂಟ ನಿ., ಬೆಂಗಳೂರು ದಿನಾಂಕ: 31–01–2025 **ಆನೇಕಲ್ ತಾಲ್ಲೂಕಿನ ಎಲ್ಲಾ ಹಾಲು ಉತ್ಪಾದಕರ ಸಹಕಾರ ಸಂಘಗಳ ಅಧ್ಯಕ್ಷರು ಮತ್ತು ಮುಖ್ಯಕಾರ್ಯನಿರ್ವಾಹಕರುಗಳಿಗೆ** ಒಂದು ದಿನದ ಜಿಲ್ಲಾ ಮಟ್ಟದ ವಿಶೇಷ ತರಬೇತಿ ಕಾರ್ಯಕ್ರಮವನ್ನು ಬೆಂಗಳೂರು ಸಹಕಾರ ಹಾಲು ಒಕ್ಕೂಟ ನಿ., ಆನೇಕಲ್ ಶಿಬಿರ ಕಛೇರಿ, ಆನೇಕಲ್ ತಾಲ್ಲೂಕು, ಇಲ್ಲಿ ಏರ್ಪಡಿಸಲಾಗಿತ್ತು.

ಸಮಾರಂಭದ ಉದ್ಘಾಟನೆಯನ್ನು ಬೆಂಗಳೂರು ಸಹಕಾರ ಹಾಲು ಒಕ್ಕೂಟ ನಿ., ಇದರ ಮಾಜಿ ಅಧ್ಯಕ್ಷರು ಹಾಗೂ ಹಾಲಿ ನಿರ್ದೇಶಕರಾದ **ಶ್ರೀ ಬಿ.ಜಿ. ಆಂಜನಪ್ಪ** ಇವರು ನೆರವೇರಿಸಿ ಮಾತನಾಡುತ್ತಾ, ಬಮೂಲ್ ಸಂಸ್ಥೆಯಿಂದ ಹಾಲು ಉತ್ಪಾದಕರ ಸಹಕಾರ ಸಂಘಗಳಿಗೆ ಎಲ್ಲ ರೀತಿಯ ಸಹಕಾರ ನೀಡಲಾಗುತ್ತಿದೆ. ನಮ್ಮ ಭಾಗದ ಹಾಲು ಉತ್ಪಾದಕರ ಸಹಕಾರ ಸಂಘಗಳು ಉತ್ತಮವಾಗಿ ಕೆಲಸ ನಿರ್ವಹಿಸುತ್ತಿವೆ. ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳ ಹಾಗೂ ಬೆಂಗಳೂರು ನಗರ ಜಿಲ್ಲಾ ಸಹಕಾರ ಒಕ್ಕೂಟ ಸಹಕಾರ ಸಂಘಗಳ ಬಲವರ್ಧನೆಗಾಗಿ ಸಹಕಾರ ಸಂಘಗಳನ್ನು ಸಂಘಟಿಸಿ ತರಬೇತಿ ನೀಡುತ್ತಿವೆ. ಹಾಗೂ ಪರಿಣಿತ ಉಪನ್ಯಾಸಕರಿಂದ ತರಬೇತಿಯನ್ನು ನೀಡುತ್ತಿದ್ದು ಇದನ್ನು ಸದುಪಯೋಗ ಪಡಿಸಿಕೊಳ್ಳಬೇಕೆಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಬೆಂಗಳೂರು ಜಿಲ್ಲಾ ಕೇಂದ್ರ ಸಹಕಾರ ಬ್ಯಾಂಕಿನ ಮಾಜಿ ಅಧ್ಯಕ್ಷರು ಹಾಗೂ ಹಾಲಿ ನಿರ್ದೇಶಕರಾದ ಶ್ರೀ ಡಿ. ಹುನುಮಂತಯ್ಯ ಮಾತನಾಡುತ್ತಾ, ಜಿಲ್ಲಾ ಕೇಂದ್ರ ಸಹಕಾರ ಬ್ಯಾಂಕುಗಳಿಂದ ಕಡಿಮೆ ಬಡ್ಡಿದರದಲ್ಲಿ ಸಾಲವನ್ನು ನೀಡುತ್ತಿದ್ದು, ಸಹಕಾರ ಸಂಘಗಳ ಕಾರ್ಯದರ್ಶಿಗಳು ಹೆಚ್ಚಿನ ಸದಸ್ಯರಿಗೆ ಹಸು ಸಾಲವನ್ನು ಕೊಡಿಸುವಂತಹ ಕಾರ್ಯನಿರ್ವಹಿಸಿದ್ದಲ್ಲಿ ಸಹಕಾರ ಕ್ಷೇತ್ರವು ಇನಷ್ಟು ಸದೃಢವಾಗಿ ಬೆಳೆಯಲು ಸಹಾಯವಾಗುತ್ತದೆ. ತರಬೇತಿ ಕಾರ್ಯಕ್ರಮಗಳಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಸದುಪಯೋಗ ಪಡೆದುಕೊಳ್ಳಬೇಕು ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಬೆಂಗಳೂರು ನಗರ ಜಿಲ್ಲಾ ಸಹಕಾರ ಒಕ್ಕೂಟದ ಅಧ್ಯಕ್ಷರಾದ ಶ್ರೀ ಜೆ. ಮಂಜುನಾಥ್ ರವರು ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿ ಮಾತನಾಡುತ್ತಾ, ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳದ ಮಾರ್ಗದರ್ಶನದಲ್ಲಿ ಬೆಂಗಳೂರು ನಗರ ಜಿಲ್ಲಾ ಸಹಕಾರ ಒಕ್ಕೂಟ ಸಹಕಾರ ಶಿಕ್ಷಣ, ತರಬೇತಿಗಳನ್ನು ಜಿಲ್ಲೆಯಾದ್ಯಂತ ಹಮ್ಮಿಕೊಳ್ಳಲಾಗುತ್ತಿದೆ. ಇಂತಹ ತರಬೇತಿ ಕಾರ್ಯಕ್ರಮಗಳಲ್ಲಿ ಸಹಕಾರ ಸಂಘಗಳ ಪದಧಿಕಾರಿಗಳು, ನಿರ್ದೇಶಕರು, ಸದಸ್ಯರು ಮತ್ತು ಅಧಿಕಾರಿ ಸಿಬ್ಬಂದಿಗಳು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ತರಬೇತಿಯಲ್ಲಿ ನೀಡುವಂತಹ ಮಾಹಿತಿಗಳನ್ನು ನಿಮ್ಮ ಸಂಘಗಳಲ್ಲಿ ಅಳವಡಿಸಿಕೊಳ್ಳಬೇಕೆಂದು ಕರೆ ನೀಡಿದರು. ಒಕ್ಕೂಟದ ವತಿಯಿಂದ ಮುಂದಿನ ದಿನಗಳಲ್ಲಿ ಇನ್ನೂ ಅನೇಕ ತರಬೇತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುವುದು ಎಂದು ಭರವಸೆ ನೀಡಿದರು.

ಹಿರಿಯ ಉಪನಿರ್ದೇಶಕರು (ನಿವೃತ್ತ) ಕೆ.ಎಂ.ಎಫ್. ಬೆಂಗಳೂರು ಶ್ರೀ ಆರ್ ರಾಜಣ್ಣ "ಹಾಲು ಉತ್ಪಾದಕರ ಸಹಕಾರ ಸಂಘಗಳಲ್ಲಿ ಅಧ್ಯಕ್ಷರು ಮತ್ತು ಮುಖ್ಯ ಕಾರ್ಯನಿರ್ವಾಹಕರುಗಳ ಕರ್ತವ್ಯ ಮತ್ತು ಜವಾಬ್ದಾರಿಗಳ" ಕುರಿತು ಉಪನ್ಯಾಸವನ್ನು ನೀಡಿದರು ಮತ್ತು ರಾಜ್ಯ ತರಬೇತುದಾರರು, ಬೆಂಗಳೂರು ಶ್ರೀ ಸ್ವಾರ್ ವೆಂಕಟೇಶ್, "ವ್ಯಕ್ತಿತ್ವ ವಿಕಸನ ಮತ್ತು ಮಾನಸಿಕ ಒತ್ತಡಗಳ ನಿರ್ವಹಣೆ" ಕುರಿತು ಉಪನ್ಯಾಸವನ್ನು ನೀಡಿದರು.

ಮುಖ್ಯ ಅತಿಥಿಗಳಾಗಿ ಬೆಂಗಳೂರು ನಗರ ಜಿಲ್ಲಾ ಸಹಕಾರ ಒಕ್ಕೂಟದ ನಿರ್ದೇಶಕರಾದ ಶ್ರೀ ಅಮರೇಶ ರೆಡ್ಡಿ ಅತಿಥಿ ಗಣ್ಯರನ್ನು ಸ್ವಾಗತಿಸಿದರು, ಶ್ರೀ ಸಿ. ವೆಂಕಟೇಶ್ ಮಾತನಾಡಿದರು, ಎ. ಮೂರ್ತಿಗೌಡ, ಉಪವ್ಯವಸ್ಥಾಪಕರಾದ ಡಾ॥ ಸಿ.ಜಿ. ಸುರೇಶ್, ಬೆಂಗಳೂರು ನಗರ ಜಿಲ್ಲಾ ಸಹಕಾರ ಒಕ್ಕೂಟದ ಮುಖ್ಯಕಾರ್ಯನಿರ್ವಹಣಾಧಿಕಾರಿ ಶ್ರೀಮತಿ ಸವಿತಾ ಬಿಸನಾಳ ಕಾರ್ಯಕ್ರಮ ನಿರೂಪಿಸಿದರು, ಜಿಲ್ಲಾ ಸಹಕಾರ ಶಿಕ್ಷಕರಾದ ಶ್ರೀ ಮಂಜುನಾಥ ನಾಗತಾಣ, ಶ್ರೀಮತಿ ಲಕ್ಷ್ಮೀ, ವ್ಯವಸ್ಥಾಪಕರಾದ ಶ್ರೀ ಆರ್. ನಾಗರಾಜ್, ಸಿಬ್ಬಂದಿ ಮಾರುತಿ ಉಪಸ್ಥಿತರಿದ್ದರು.

ಕಾರ್ಯಕ್ರಮದಲ್ಲಿ ಬೆಂಗಳೂರು ನಗರ ಜಿಲ್ಲಾ ಸಹಕಾರ ಒಕ್ಕೂಟದ ವತಿಯಿಂದ ಯುವ ಕ್ರೀಡಾ ಪ್ರತಿಭೆಯನ್ನು ಗುರುತಿಸಿ ಸನ್ಮಾನ ಮಾಡಲಾಗಿದೆ. ಒಕ್ಕೂಟ ನಿರ್ದೇಶಕರಾದ ಶ್ರೀ ಅಮರೇಶ್ ರೆಡ್ಡಿ ಅವರ ಮಗಳಾದ ಕುಮಾರಿ ಎ. ಅಂಜುಶ್ರೀ ರವರನ್ನು ಸ್ಕೇಟಿಂಗ್ ಸ್ಪರ್ಧೆಯಲ್ಲಿ ರಾಷ್ಟ್ರಮಟ್ಟಕ್ಕೆ ಆದ ಹಿನ್ನೆಲೆಯಲ್ಲಿ ಅಭಿನಂದಿಸಿ ಗೌರವಿಸಲಾಗಿದೆ.

ಸಹಿ/–
ಮುಖ್ಯಕಾರ್ಯನಿರ್ವಹಣಾಧಿಕಾರಿ


ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳ ನಿ.,ಬೆಂಗಳೂರು
ಬೆಂಗಳೂರು ನಗರ ಜಿಲ್ಲಾ ಸಹಕಾರ ಒಕ್ಕೂಟ ನಿ., ಬೆಂಗಳೂರು ಹಾಗೂ
ಬೆಂಗಳೂರು ಸಹಕಾರ ಹಾಲು ಒಕ್ಕೂಟ ನಿ., ಬೆಂಗಳೂರು


ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳ ನಿ.,ಬೆಂಗಳೂರು